ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ತಿನ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ          ದಿನಾಂಕ : DATE : 10/03/2020

# ಕೃಷ್ಣಾ ಮೇಲ್ದಂಡೆ ಯೋಜನೆಗೆ ಹೆಚ್ಚು ಅನುದಾನ ನೀಡಿ

ವಿಶ್ವವಾಣಿ 10/3/2020

ವಿಧಾನ ಪರಿಷತ್: ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಯೋಜನೆ ಪೂರ್ತಿಗೊಳಿಸಲು ಬಜೆಟ್‌ನ ಶೇ.10 ರಷ್ಟು ಹಣ ಮೀಸಲಿಡಬೇಕು ಎಂದು ವಿಧಾನ ಪರಿಷತ್ತಿನ ಪ್ರತಿ ಪಕ್ಷದ ನಾಯಕ ಎಸ್.ಆರ್. ಪಾಟೀಲ್ ಒತ್ತಾಯಿಸಿದರು.

ಪರಿಷತ್ತಿನಲ್ಲಿ ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲೆ ಮಾತನಾಡಿದ ಅವರು, ಯುಕೆಪಿ ಮೂರನೇ ಹಂತದ ಯೋಜನೆಗೆ ಅಂದಾಜು 75 ಸಾವಿರ ಕೋಟಿ ರು. ಅನುದಾನದ ಅಗತ್ಯವಿದೆ. ಹೀಗಾಗಿ, ರಾಜ್ಯ ಸರಕಾರದ ಬಜೆಟ್‌ನಲ್ಲಿ ಶೇ.10 ಮೀಸಲಿಟ್ಟರೆ, ಮೂರು ವರ್ಷಗಳಲ್ಲಿ ಈ ಯೋಜನೆ ಪೂರ್ತಿಯಾಗುತ್ತದೆ ಎಂದು ವಿವರಿಸಿದರು.

ಮೂರನೇ ಹಂತದ ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಮಾಡಲು ಯಾವುದೇ ಕಾರಣಕ್ಕೂ ರಾಜ್ಯ ಸರಕಾರ ಮುಂದಾಗಬಾರದು. ಈ ಸಂಬಂಧ ಕೇಂದ್ರದೊಂದಿಗೆ ಯಾವುದೇ ಮಾತುಕತೆಯ ಅಗತ್ಯವಿಲ್ಲ. ಕೃಷ್ಣಾ ಮೇಲ್ದಂಡೆ ಯೋಜನೆಯ 1 ಮತ್ತು ಎರಡನೇ ಹಂತ ನಡೆದ ಸಂದರ್ಭದಲ್ಲಿ 2.73 ಲಕ್ಷ ಎಕರೆ ಭೂಮಿ ಸ್ವಾಧೀನಪಡಿಸಿಕೊಳ್ಳಲಾಗಿದೆ. ಅಲ್ಲದೆ, ಸುಮಾರು 176 ಹಳ್ಳಿಗಳನ್ನು ಸ್ವಾಧೀನಪಡಿಸಿಕೊಂಡು, ಪರ್ಯಾಯವಾಗಿ ಪುನರ್ವಸತಿ ಕಲ್ಪಿಸಲಾಗಿದೆ. ಇದೀಗ ಮೂರನೇ ಹಂತದ ಯೋಜನೆ ಅಡಿಯಲ್ಲಿ 1.30 ಲಕ್ಷ ಎಕರೆ ಭೂಮಿ ಹಾಗೂ 20 ಗ್ರಾಮಗಳನ್ನು ಸ್ವಾಧೀನಪಡಿಸಿಕೊಳ್ಳಲಾಗುತ್ತಿದೆ ಎಂದರು.

ಈ ಯೋಜನೆಯಿಂದ ಉತ್ತರ ಕರ್ನಾಟಕ ಪ್ರದೇಶದ ಸುಮಾರು 7 ಪ್ರಮುಖ ಜಿಲ್ಲೆಗಳಿಗೆ ನೀರಾವರಿ ಸೌಲಭ್ಯ ಸಿಗುತ್ತದೆ. ಆದುದರಿಂದ ರಾಷ್ಟ್ರೀಯ ಯೋಜನೆ ನೆಪವನ್ನಿಟ್ಟುಕೊಂಡು ಯೋಜನೆ ಮುಂದೂಡಬಾರದು. ಒಂದು ವೇಳೆ ಮುಂದೂಡಿದರೆ ನಾವು ಎಂತಹ ತ್ಯಾಗಕ್ಕೂ ಸಿದ್ಧರಾಗಬೇಕಾಗುತ್ತದೆ. ಕೃಷ್ಣಾ ಮೇಲ್ದಂಡೆ ಯೋಜನೆ ಅಡಿಯಲ್ಲಿ ಕೆಲಸ ಮಾಡಲು ಸರಿಯಾದ ಅಧಿಕಾರಿಗಳೇ ಇಲ್ಲ. ಇಲ್ಲಿ ಒಟ್ಟು 855 ಹುದ್ದೆಗಳಿದ್ದು, ಅದರಲ್ಲಿ 460 ಸ್ಥಾನಗಳು ಖಾಲಿಯಿವೆ. ಹೀಗೆದ್ದರೆ ಯೋಜನೆ ಹೇಗೆ ಪೂರ್ತಿಯಾಗುತ್ತದೆ. ಹೀಗಾಗಿ, ಶೀಘ್ರದಲ್ಲಿಯೇ ಎಲ್ಲ ಹುದ್ದೆಗಳನ್ನು ಭರ್ತಿ ಮಾಡಬೇಕು ಎಂದರು.